**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1057 |
| ಸದಸ್ಯರ ಹೆಸರು | ಶ್ರೀ ಎನ್. ರವಿಕುಮಾರ್ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 16.12.2025 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸ್ಫೋಟಕ ಸಿಡಿಸಿ ಕಲ್ಲುಗಣಿಗಾರಿಕೆ ಮಾಡಲು ಯಾವ ಯಾವ ಇಲಾಖೆಗಳಿಂದ ಅನುಮತಿ ಪಡೆಯಬೇಕಾಗಿದೆ; ಕಲ್ಲುಗಣಿಗಾರಿಕೆ ಮಾಡಲು ಅನುಮತಿ ನೀಡಲಿಲ್ಲವೆಂದಾದಲ್ಲಿ ಇದುವರೆಗೆ ಎಷ್ಟು ಜನರ ಮೇಲೆ ಕೇಸು ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ;</td><td>
• Mines Act-1952 ಮತ್ತು Explosive Rules-2008ರ ನಿಯಮ-103 ರಂತೆ ಕಲ್ಲುಗಣಿಗಾರಿಕೆಗೆ ಸ್ಫೋಟಕ ಬಳಕೆ ಮಾಡಲು Director General Mines Safety (DGMS) ರವರಿಂದ ಲೈಸೆನ್ಸ್ ಪಡೆಯಬೇಕಾಗಿರುತ್ತದೆ.<br>
• ಸ್ಫೋಟಕ ಬಳಕೆ ಸಂಬಂಧ Explosive Act 1884 ಮತ್ತು Explosive Rule-2008ರ ನಿಯಮಾವಳಿಗಳನ್ನು ಪಾಲಿಸಲಾಗುತ್ತದೆ. ಮುಂದುವರೆದು, ಸ್ಫೋಟಕ ನಿಯಮ-2008ರ ನಿಯಮ-128ರಂತೆ ಸ್ಫೋಟಕ ತಪಾಸಣೆಗೆ ಈ ಕೆಳಕಂಡ ಅಧಿಕಾರಿಗಳು ಕಾರ್ಯವ್ಯಾಪ್ತಿ ಹೊಂದಿರುತ್ತಾರೆ.
<table>
<tr><th>ಅಧಿಕಾರಿಗಳು</th><th>ವ್ಯಾಪ್ತಿ</th></tr>
<tr><td>ಚೀಫ್ ಕಂಟ್ರೋಲರ್ ಆಫ್ ಎಕ್ಸ್ ಪ್ಲೋಸೀವ್</td><td>ಭಾರತದ ಎಲ್ಲಾ ಪ್ರದೇಶಗಳಲ್ಲಿ</td></tr>
<tr><td>ಎಲ್ಲಾ ಜಿಲ್ಲಾ ಮ್ಯಾಜಿಸ್ಟ್ರೇಟರ್</td><td>ಕಾರ್ಯವ್ಯಾಪ್ತಿ ಪ್ರದೇಶ</td></tr>
<tr><td>ಉಪ ವಿಭಾಗಾಧಿಕಾರಿ</td><td>ಕಾರ್ಯವ್ಯಾಪ್ತಿ ಪ್ರದೇಶ</td></tr>
<tr><td>ಪೋಲೀಸ್ ಕಮೀಷನರ್ ಮತ್ತು ಸಬ್ ಇನ್.ಸ್ಪೆಕ್ಟರ್ ಆಫ್ ಪೋಲೀಸ್ ಹಾಗೂ ಮೇಲ್ಪಟ್ಟ ಶ್ರೇಣಿಯ ಅಧಿಕಾರಿಗಳು</td><td>ಕಾರ್ಯವ್ಯಾಪ್ತಿ ಪ್ರದೇಶ</td></tr>
<tr><td>ಡೈರೆಕ್ಟರ್ ಜನರಲ್ ಆಫ್ ಮೈನ್ಸ್ ಸೇಫ್ಟಿ</td><td>ಕಾರ್ಯವ್ಯಾಪ್ತಿ ಪ್ರದೇಶ</td></tr>
</table>
• ಸ್ಫೋಟಕ ಸಾಗಾಣಿಕೆ, ಸಂಗ್ರಹಣೆ ಮತ್ತು ಬಳಕೆಯ ತಪಾಸಣೆಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಯಾವುದೇ ಅಧಿಕಾರ ಇರುವುದಿಲ್ಲ.<br>
• ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಕ್ರಮ ಗಣಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ 546 ಪ್ರಕರಣಗಳನ್ನು ಪತ್ತೆ ಹಚ್ಚಿ ಎಂ.ಎಂ.ಡಿ & ಆರ್ ಕಾಯ್ದೆ -1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮಗಳಂತೆ ಮೊಕದ್ದಮೆಗಳನ್ನು ದಾಖಲಿಸಿದೆ.
</td></tr>
<tr><td>ಆ)</td><td>ಜಿಲ್ಲಾಡಳಿತ ಗಮನಕ್ಕೆ ಬಾರದೆ ಕಲ್ಲು ಗಣಿಗಾರಿಕೆ</td><td>• ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಕ್ರಮ ಕಲ್ಲುಗಣಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಪ್ರಕರಣಗಳನ್ನು ಪತ್ತೆ</td></tr>
</table>

ನಡೆಯಲು ಹೇಗೆ ಸಾಧ್ಯ; ಅಕ್ರಮ ಗಣಿಗಾರಿಕೆಯೆಂದದಲ್ಲಿ ನೇರವಾಗಿ ಕ್ರಮಕೈಗೊಳ್ಳಲು ಇರುವ ಸಮಸ್ಯೆಗಳೇನು; ಗಣಿಗಾರಿಕೆಗೆ ಅನುಮತಿಯೇ ನೀಡಲಿಲ್ಲವೆಂದಾದಲ್ಲಿ ಅನುಮತಿ ನೀಡದ ಗಣಿಗಾರಿಕೆಯನ್ನು ಯಾವ ನಿಯಮಗಳ ಅನ್ವಯ ನಿಷೇಧಿಸಲಾಗಿದೆ;

ಹಚ್ಚಲಾಗಿರುತ್ತದೆ, ಅಕ್ರಮ ಕಲ್ಲುಗಣಿಗಾರಿಕೆ ನಡೆಸುವವರ ವಿರುದ್ಧ ಎಂ.ಎಂ.ಡಿ & ಆರ್ ಕಾಯ್ದೆ -1957 ರ ಸೆಕ್ಷನ್-4, 4(1-A), 21, 22 ಹಾಗೂ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-43, 43-A ಮತ್ತು 44 ರಂತೆ ಮೊಕದ್ದಮೆಗಳನ್ನು ದಾಖಲಿಸಿ, ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿದೆ:

| ಕ್ರ. ಸಂ. | ವರ್ಷ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ದಂಡದ ಮೊತ್ತ (ರೂ.ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆಗಳ ಸಂಖ್ಯೆ |
|---|---|---|---|---|
| 1. | 2023-24 | 784 | 919.17 | 189 |
| 2. | 2024-25 | 657 | 715.83 | 186 |
| 3. | 2025-26 (ನವೆಂಬರ್ ಮಾಹೆಯವರೆಗೆ) | 553 | 489.82 | 171 |
| ಒಟ್ಟು | | 1994 | 2124.82 | 546 |

ರಾಜ್ಯದಲ್ಲಿ ಅನಧಿಕೃತ ಗಣಿಗಾರಿಕೆ ನಿಯಂತ್ರಿಸಲು ಸರ್ಕಾರದಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ :-

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 21 ಎಂಎಂಎನ್ (2) 2014 ದಿನಾಂಕ:21-01-2014 ರಂತೆ ಎಂ.ಎಂ.ಡಿ & ಆರ್ ಕಾಯ್ದೆ 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-43 ಮತ್ತು 46 ರಂತೆ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಕಂದಾಯ, ಅರಣ್ಯ, ಪೋಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.
2. ಮೇಲ್ಕಂಡ ಸಮಿತಿಯ ಸದಸ್ಯ ಇಲಾಖೆಯವರು ಅನಧಿಕೃತ ಕಲ್ಲುಗಣಿಗಾರಿಕೆ / ಸಾಗಾಣಿಕೆಯನ್ನು ಮತ್ತು ದಾಸ್ತಾನು ಕಂಡುಬಂದಲ್ಲಿ ನಿಯಮಾನುಸಾರ ದಂಡ ವಿಧಿಸಲಾಗುತ್ತದೆ ಮತ್ತು ಮೊಕದ್ದಮೆಗಳನ್ನು ದಾಖಲಿಸಲಾಗುತ್ತದೆ.
3. ಖನಿಜಗಳ ಗಣಿಗಾರಿಕೆಗೆ ಗಣಿ ಗುತ್ತಿಗೆಗಳನ್ನು ಪಾರದರ್ಶಕವಾಗಿ ಹರಾಜು ಮೂಲಕ ಮಂಜೂರು ಮಾಡಲಾಗುತ್ತಿದೆ.
4. ರಾಜ್ಯದಲ್ಲಿ ಮಂಜೂರು ಮಾಡಿರುವ ಕಟ್ಟಡ ಕಲ್ಲುಗಣಿಗುತ್ತಿಗೆ ಪ್ರದೇಶಗಳನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ (**KSRSAC**) ರವರಿಂದ ಕಲ್ಲುಗಣಿಗುತ್ತಿಗೆ ಪ್ರದೇಶಗಳ ಡ್ರೋಣ್/ ಡಿ.ಜಿ.ಪಿ.ಎಸ್ ಸರ್ವೆ ಕೈಗೊಂಡು, ಗುತ್ತಿಗೆ ಪ್ರದೇಶದ ಪ್ರಸ್ತುತ ಭೂಮಟ್ಟದ ಅಳತೆಗಳನ್ನು ಘನೀಕರಿಸಲಾಗಿದೆ.
5. **Integrated Lease Management System (ILMS) version-II** ಜಾರಿಗೊಳಿಸಲಾಗುತ್ತಿದ್ದು, ಅನಧಿಕೃತ ಖನಿಜ ಸಾಗಾಣಿಕೆಯನ್ನು ತಡೆಗಟ್ಟಲು ಖನಿಜ ಸಾಗಾಣಿಕಾ ವಾಹನಗಳಿಗೆ **GPS** ಅಳವಡಿಸಿ ಕೇಂದ್ರೀಕೃತವಾಗಿ

| | | |
|---|---|---|
| | | ನಿಗಾವಹಿಸಲು ತಂತ್ರಾಂಶ ರೂಪಿಸಲಾಗಿದೆ.<br>6. ಮಂಜೂರಾದ ಗಣಿ/ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ಗಣಿಗಾರಿಕೆಯನ್ನು ನಡೆಸುವುದನ್ನು ತಡೆಗಟ್ಟಲು Geo-fencing ಅಳವಡಿಸಿ ನಿರ್ವಹಿಸಲು ಕ್ರಮ ಕೈಗೊಳ್ಳಲಾಗಿದೆ.<br>7. ಅನಧಿಕೃತ ಖನಿಜ ಸಾಗಾಣಿಕೆಯನ್ನು ಪತ್ತೆ ಹಚ್ಚಲು ಖನಿಜ ರವಾನೆ ಪರವಾನಿಗೆ ಕಡ್ಡಾಯಗೊಳಿಸಲಾಗಿದ್ದು, ಖನಿಜ ರವಾನೆ ಪರವಾನಿಗೆ ವಿಶೇಷ ರಕ್ಷಣಾತ್ಮಕ ಹಾಳೆಯಲ್ಲಿ ವಿತರಿಸಲಾಗುತ್ತಿದೆ.<br>8. ಅನಧಿಕೃತ ಗಣಿಗಾರಿಕೆಯನ್ನು ತಡೆಗಟ್ಟಲು ಖನಿಜ ರಕ್ಷಣಾ ಪಡೆ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ. |
| ಇ) | ಕಲ್ಲುಗಣಿಗಾರಿಕೆಗೆ ಅನುಮತಿ ಪಡೆಯಲು ಇರಬೇಕಾದ ಕನಿಷ್ಟ ಮೂಲಭೂತ ಸೌಲಭ್ಯಗಳು ಯಾವುವು; | • ಸರ್ಕಾರದ ಒಡೆತನದ ಜಮೀನುಗಳಲ್ಲಿ ಹರಾಜು ಮೂಲಕ ಕಲ್ಲುಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲಾಗುತ್ತಿದ್ದು, ಈ ಕೆಳಕಂಡ ಅರ್ಹತೆ ಹೊಂದಿರತಕ್ಕದ್ದು :-<br>1. Bidder should be an Indian citizen.<br>2. Bidder should not be a minor or an undischarged insolvent or is of unsound mind;<br>3. Bidder should not be holding an office of profit under the State Government or Central Government.<br>4. Bidder should have paid the arrears of royalty or dead rent in respect of lease(s) held by him.<br>5. Bidder should not have been convicted of any offence involving moral turpitude or illegal mining.<br>6. Bidder should belong to the category for whom the block is so reserved.<br>• ಇದಲ್ಲದೆ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ಬಿಡ್‌ದಾರನು ಟೆಂಡರ್ ಡಾಕ್ಯೂಮೆಂಟ್‌ನಲ್ಲಿ ನಿಗಧಿಪಡಿಸುವ ವಾರ್ಷಿಕ ವಹಿವಾಟು, (Turnover) ನಿವ್ವಳ ವಾರ್ಷಿಕ ಆದಾಯ (Networth) ಹಾಗೂ ಇತರೆ ತಾಂತ್ರಿಕ ಅರ್ಹತೆಗಳನ್ನು ಹೊಂದಿರಬೇಕಾಗಿರುತ್ತದೆ.<br>• ಪಟ್ಟಾ ಜಮೀನುಗಳಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಹರಾಜು ರಹಿತವಾಗಿ ಪಟ್ಟಾದಾರರಿಗೆ ಅಥವಾ ಪಟ್ಟಾದಾರರು ಒಪ್ಪಿಗೆ ನೀಡುವ ವ್ಯಕ್ತಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರ, ಭೂಪರಿವರ್ತನೆ ಆದೇಶ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಜಿಲ್ಲಾ ಟಾಸ್ಕ ಪೋರ್ಸ್ (ಗಣಿ) ಸಮಿತಿಯಲ್ಲಿ ಮಂಡಿಸಿ ಅನುಮೋದನೆ ಪಡೆದು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು/ಹಿರಿಯ ಭೂವಿಜ್ಞಾನಿ ರವರಿಂದ ಕಲ್ಲುಗಣಿಗಾರಿಕೆಗೆ ಲೈಸೆನ್ಸ್ ನೀಡಲಾಗುತ್ತಿದೆ. |

| | | |
|---|---|---|
| ಈ) | ಕಳೆದ ಎರಡು ವರ್ಷಗಳಲ್ಲಿ ಎಷ್ಟು ಹೊಸ ಕಲ್ಲುಗಣಿಗಾರಿಕೆಗೆ ಅನುಮತಿ ನೀಡಲಾಗಿದೆ; ಕಲ್ಲುಗಣಿಗಾರಿಕೆಯಿಂದ ಉಂಟಾಗುವ ಪರಿಸರ ಮಾಲಿನ್ಯಕ್ಕೆ ಹೊಣೆ ಯಾರು; ಪರಿಸರ ಮಾಲಿನ್ಯ ತಡೆಯಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು? | • ರಾಜ್ಯದಲ್ಲಿ ಅಲಂಕಾರಿಕ ಶಿಲೆ ಮತ್ತು ಕಟ್ಟಡ ಕಲ್ಲುಗಣಿಗಾರಿಕೆಗೆ 2023-24ನೇ ಸಾಲಿನಲ್ಲಿ 359 ಮತ್ತು 2024-25ನೇ ಸಾಲಿನಲ್ಲಿ 177 ಗುತ್ತಿಗೆಗಳನ್ನು ಮಂಜೂರು ಮಾಡಲಾಗಿದೆ.<br>• ಗಣಿಗಾರಿಕೆಯಿಂದ ಪರಿಸರಕ್ಕೆ ಉಂಟಾಗುವ ಆಘಾತವನ್ನು ತಡೆಗಟ್ಟುವ ಸಂಬಂಧ ವ್ಯವಸ್ಥಿತ ಮತ್ತು ವೈಜ್ಞಾನಿಕವಾಗಿ ಗಣಿಗಾರಿಕೆಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಪರಿಸರ ಅನುಮತಿ ಪತ್ರ ಪಡೆಯುವುದನ್ನು ಕಾಯ್ದೆ/ನಿಯಮಗಳಲ್ಲಿ ಕಡ್ಡಾಯಗೊಳಿಸಲಾಗಿದೆ.<br>• ಅದರಂತೆ, ಕಲ್ಲು ಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲು ಕಡ್ಡಾಯವಾಗಿ ಅನುಮೋದಿತ ಕ್ವಾರಿಯಿಂಗ್ ಪ್ಲಾನ್, ಪರಿಸರ ನಿರ್ವಹಣೆ ಯೋಜನೆ, ಮೈನ್ ಕ್ಲೋಷರ್ ಪ್ಲಾನ್ ನೊಂದಿಗೆ ಪರಿಸರ ಅನುಮತಿ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಗಣಿಗಾರಿಕೆಗೆ ಅನುಮತಿ ನೀಡಲಾಗುತ್ತಿದೆ. |

ಸಂಖ್ಯೆ:ಸಿಐ-ಎಂಎಂಎನ್/322/2025

**(ಎಸ್.ಎಸ್.ಮಲ್ಲಿಕಾರ್ಜುನ್)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.